(16)

**ಕರ್ನಾಟಕ ಸರ್ಕಾರ**

**ಸಂಖ್ಯೆ:ಸಿಆಸುಇ:113:ಆರ್.ಟಿ.ಐ.:2015**

**ಕರ್ನಾಟಕ ಸರ್ಕಾರದ ಸಚಿವಾಲಯ,**
**ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಜನಸ್ಪಂದನ)**
**3ನೇ ಮಹಡಿ, ಪೋಡಿಯಂ ಬ್ಲಾಕ್,**
**ವಿಶ್ವೇಶ್ವರಯ್ಯ ಮುಖ್ಯ ಗೋಪುರ,**
**ಬೆಂಗಳೂರು, ದಿನಾಂಕ: 05.08.2015.**

# ಸುತ್ತೋಲೆ

ವಿಷಯ: ಕರ್ನಾಟಕ ಮಾಹಿತಿ ಆಯೋಗದ ನೋಟಿಸ್‌ಗಳನ್ನು ಸಂಬಂಧಪಟ್ಟ ಸಾರ್ವಜನಿಕ ಮಾಹಿತಿ ಅಧಿಕಾರಿಗಳಿಗೆ ತಲುಪಿಸುವ ಬಗ್ಗೆ

---0---

ಮಾಹಿತಿ ಹಕ್ಕು ಅಧಿನಿಯಮ, 2005ರ ಸಂಪೂರ್ಣ ಅನುಷ್ಠಾನ ಮತ್ತು ಬಲವರ್ಧನೆಗಾಗಿ ಕರ್ನಾಟಕ ಮಾಹಿತಿ ಆಯೋಗವು 2013-14ನೇ ಸಾಲಿನಲ್ಲಿ ಮಾಡಿರುವ ಶಿಫಾರಸ್ಸಿನನ್ವಯ:

ಕರ್ನಾಟಕ ಮಾಹಿತಿ ಆಯೋಗವು ಕಳುಹಿಸುವ ಕಾರಣ ಕೇಳುವ ನೋಟಿಸುಗಳನ್ನು ಮತ್ತು ದಂಡ ವಿಧಿಸಿರುವ ಆದೇಶಗಳ ಪ್ರತಿಗಳನ್ನು ಸಾರ್ವಜನಿಕ ಮಾಹಿತಿ ಅಧಿಕಾರಿಗಳು ವರ್ಗವಾಗಿದ್ದರೂ ಸಹ ಅವರು ಈಗ ಇರುವ ಹೊಸ ವಿಳಾಸಕ್ಕೆ ಮತ್ತು ಅವರ ನಿಕಟ ವರಿಷ್ಠರಿಗೆ ಕಳುಹಿಸಿಕೊಟ್ಟು ಆಯೋಗದ ಗಮನಕ್ಕೆ ತರಬೇಕು ಹಾಗೂ ಅನುಸರಣೆ ಮಾಡಬೇಕಾಗಿರುವ ಇತರೆ ಅಂಶಗಳು ಆದೇಶದಲ್ಲಿದ್ದಲ್ಲಿ ಅನುಸರಣೆ ಮಾಡುವ ಉದ್ದೇಶಕ್ಕಾಗಿ ಉತ್ತರಾಧಿಕಾರಿಯಾಗಿ ಬರುವ ಸಾರ್ವಜನಿಕ ಮಾಹಿತಿ ಅಧಿಕಾರಿಯು ಪ್ರತಿ ಇಟ್ಟುಕೊಳ್ಳತಕ್ಕದ್ದು.

ಆದ್ದರಿಂದ ತಮ್ಮ ಆಡಳಿತದ ಅಧೀನದಲ್ಲಿ ಬರುವ ಎಲ್ಲ ಸಾರ್ವಜನಿಕ ಪ್ರಾಧಿಕಾರಗಳು, ಆಯೋಗದ ಶಿಫಾರಸ್ಸಿನನ್ವಯ ಕ್ರಮ ವಹಿಸುವಂತೆ ಸಾರ್ವಜನಿಕ ಮಾಹಿತಿ ಅಧಿಕಾರಿಗಳಿಗೆ ಸೂಚಿಸುವಂತೆ ನಿರ್ದೇಶಿಸುವುದು.

**(ಪರಮೇಶ್ ಹಾಂಡೆ)**
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಜನಸ್ಪಂದನ)

**ಇವರಿಗೆ,**
ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು/
ಎಲ್ಲಾ ಜಿಲ್ಲಾಧಿಕಾರಿಗಳು/ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು

2..

**ಪ್ರತಿ:**

1. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಎಲ್ಲ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
3. ಮುಖ್ಯ ಮಾಹಿತಿ ಆಯುಕ್ತರ ಆಪ್ತ ಸಹಾಯಕರು, ಕರ್ನಾಟಕ ಮಾಹಿತಿ ಆಯೋಗ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಿಆಸುಇ(ಜನಸ್ಪಂದನ), ವಿ.ವಿ.ಗೋಪುರ.
5. ಕಾರ್ಯದರ್ಶಿಗಳು, ಕರ್ನಾಟಕ ಮಾಹಿತಿ ಆಯೋಗ, ಬಹುಮಹಡಿಗಳ ಕಟ್ಟಡ, ಬೆಂಗಳೂರು.